# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | (36) 12 |
| ಸದಸ್ಯರ ಹೆಸರು | : | ಶ್ರೀ ಪಿ.ಹೆಚ್. ಪೂಜಾರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು. |
| ಉತ್ತರಿಸಬೇಕಾದ ದಿನಾಂಕ | : | 17.08.2026. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಸರ್ಕಾರಿ ಬಾಲಮಂದಿರಗಳಲ್ಲಿನ ಹಾಗೂ ಬಾಲ್ಯ ನ್ಯಾಯ ಕಾಯ್ದೆ -2015ರ ಅಡಿ ನೋಂದಾಯಿತರಾಗಿ ಸರ್ಕಾರೇತರ ಸಂಘ ಸಂಸ್ಥೆಗಳು ನಡೆಸುತ್ತಿರುವ ಪಾಲನಾ ಸಂಸ್ಥೆ (Children's Home) ಗಳಲ್ಲಿರುವ ಪೋಷಕರಿಲ್ಲದ ಮಕ್ಕಳ ಸಂಖ್ಯೆ ಎಷ್ಟು (ಪ್ರತ್ಯೇಕವಾಗಿ ಜಿಲ್ಲಾವಾರು ಮಾಹಿತಿ ನೀಡುವುದು); | ರಾಜ್ಯದಲ್ಲಿ ಒಟ್ಟು 112 ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳು ಹಾಗೂ 524 ಸರ್ಕಾರೇತರ ಮಕ್ಕಳ ಪಾಲನಾ ಸಂಸ್ಥೆಗಳು (ಅನುದಾನಿತ/ಅನುದಾನರಹಿತ) ನೋಂದಣಿಯಾಗಿ ಕಾರ್ಯನಿರ್ವಹಿಸುತ್ತಿವೆ.<br>ಸದರಿ ಸಂಸ್ಥೆಗಳಲ್ಲಿ ಒಟ್ಟು 401 ಅನಾಥ, ಪರಿತ್ಯಕ್ತ, ಒಪ್ಪಿಸಲ್ಪಟ್ಟ ಮಕ್ಕಳು ಪುನರ್ವಸತಿಯನ್ನು ಪಡೆಯುತ್ತಿದ್ದಾರೆ.<br>**(ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ).** |
| ಆ) | ಸದರಿ ಬಾಲ ಮಂದಿರಗಳಲ್ಲಿನ ಮತ್ತು ಪಾಲನಾ ಸಂಸ್ಥೆಗಳಲ್ಲಿನ ಪೋಷಕರಿಲ್ಲದ ಮಕ್ಕಳ ದಾಖಲಾತಿಯ ರಿಜಿಸ್ಟರ್‌ಗಳಲ್ಲಿ ಜಾತಿಯ ಮಾಡಲಾಗಿದೆಯೇ ತಿಳಿಸುವುದು" ಕುರಿತಾಗಿ ದಾಖಲಾತಿ ಮಾಡಲಾಗಿದೆಯೇ: | ಸರ್ಕಾರಿ ಬಾಲಮಂದಿರಗಳಲ್ಲಿ ದಾಖಲಾಗುವ ಮಕ್ಕಳ ಜಾತಿಯನ್ನು ನಮೂದಿಸಲು ದಾಖಲಾತಿ ರಿಜಿಸ್ಟರ್ ನಲ್ಲಿ ಕಾಲಂ ಅನ್ನು ಕಲ್ಪಿಸಲಾಗಿದೆ.<br>ಯಾವುದೇ ಮಗು ಬಾಲಮಂದಿರಗಳಲ್ಲಿ ದಾಖಲಾಗುವ ಸಂದರ್ಭದಲ್ಲಿ ಮಗುವಿನ ದಾಖಲೆಗಳನ್ನು ಪರಿಶೀಲಿಸಿ ದಾಖಲೆಗಳಲ್ಲಿ ಜಾತಿ ನಮೂದಾಗಿದ್ದರೆ ಜಾತಿಯನ್ನು ದಾಖಲಾತಿ ರಿಜಿಸ್ಟರ್ ನಲ್ಲಿ ನಮೂದಿಸಲಾಗುವುದು. ಇಲ್ಲವಾದಲ್ಲಿ ಖಾಲಿ ಬಿಡಲಾಗುವುದು. |
| ಇ) | ದಾಖಲಾತಿ ಸಂದರ್ಭದಲ್ಲಿ ಅವರ ಜಾತಿಯ ಕುರಿತಂತೆ ಮಾಹಿತಿ ಇಲ್ಲದೇ ಇರುವ ಕಾರಣಕ್ಕಾಗಿ ಅಂಥ ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಅವರಿಗೆ ಶಿಕ್ಷಣ ಹಾಗೂ ಉದ್ಯೋಗಕ್ಕಾಗಿ ಮೀಸಲಾತಿ ದೊರಕಿಸಿಕೊಡುವ ದಿಶೆಯಲ್ಲಿ ಅಂಥಮಕ್ಕಳಿಗೆ ಪರಿಶಿಷ್ಟ ಜಾತಿ ಪ್ರಮಾಣಪತ್ರ ನೀಡಿ ಪ್ರೋತ್ಸಾಹಿಸಬೇಕೆಂದು | ಮಕ್ಕಳ ಪಾಲನಾ ಸಂಸ್ಥೆಗಳಲ್ಲಿನ ಅನಾಥ ಪರಿತ್ಯಕ್ತ, ಒಪ್ಪಿಸಲ್ಪಟ್ಟ ಮಕ್ಕಳಿಗೆ, ಸಮಾಜದಲ್ಲಿ ಎಸ್.ಸಿ/ಎಸ್.ಟಿ ಮಕ್ಕಳಿಗೆ ಸಿಗುವ ಸೌಲಭ್ಯಗಳನ್ನು ವಿಸ್ತರಿಸುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಸಲ್ಲಿಸಲಾಗಿದ್ದ ಪ್ರಸ್ತಾವನೆಯನ್ನು, SCSP/TSP ಕಾಯ್ದೆ 2013 ರನ್ವಯ ಒಪ್ಪಲು ಸಾಧ್ಯವಿಲ್ಲ ಎಂದು ಸಮಾಜ ಕಲ್ಯಾಣ ಇಲಾಖೆಯು ಪ್ರಸ್ತಾವನೆಯನ್ನು ತಿರಸ್ಕೃತಗೊಳಿಸಿರುತ್ತಾರೆ.<br>ಮುಂದುವರೆದು, ಶ್ರೀ.ಕೆ.ಜಯಪ್ರಕಾಶ್‌ಹೆಗ್ಡೆ ನೇತೃತ್ವದಲ್ಲಿ ರಚಿಸಿರುವ ಹಿಂದುಳಿದ ವರ್ಗಗಳ |

| | | |
|---|---|---|
| | ಸಾರ್ವಜನಿಕರ ಬೇಡಿಕೆ ಇದ್ದ ಕಾರಣ ಆ ರೀತಿಯ ಪ್ರಮಾಣಪತ್ರ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೆ'? | ಆಯೋಗವು 2023 ರಲ್ಲಿ ಸರ್ಕಾರಕ್ಕೆ ಸಲ್ಲಿಸಿದ ವಿಶೇಷ ವರದಿಯಲ್ಲಿ ಉದ್ಯೋಗ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಪ್ರವರ್ಗ-1ರಡಿ ಶೇ.1ರಷ್ಟು ಮೀಸಲಾತಿಯನ್ನು ಕಲ್ಪಿಸಬಹುದಾಗಿರುತ್ತದೆ ಎಂದು ಸಮಿತಿಯು ಸರ್ಕಾರಕ್ಕೆ ಸಲಹೆ/ಶಿಫಾರಸ್ಸನ್ನು ನೀಡಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಹಿಂವಕ 124 ಬಿಸಿಎ 2023, ದಿನಾಂಕ:27.03.2023 ರಲ್ಲಿ ಜಾತಿಯ ಬಗ್ಗೆ ಮಾಹಿತಿ ಇಲ್ಲದ ಅನಾಥ ಮಕ್ಕಳನ್ನು ರಾಜ್ಯದ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯ ಹಿಂದುಳಿದ ಪ್ರವರ್ಗ-II(ಡಿ)ರಲ್ಲಿ ಹೊಸದಾಗಿ ಸೇರ್ಪಡೆಗೊಳಿಸಿ ಹಿಂದುಳಿದ ವರ್ಗಗಳ ಇಲಾಖೆಯು ಆದೇಶಿಸಿರುತ್ತದೆ.<br><br>ಸರ್ಕಾರದ ಆದೇಶದ ಸಂಖ್ಯೆ: ಹಿಂವಕ 134 ಬಿಸಿಎ 2023, ದಿನಾಂಕ:27.03.2023ರ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಹಿಂವಕ 135 ಬಿಸಿಎ 2023, ದಿನಾಂಕ:27.03.2023ರ ಆದೇಶವನ್ನು ಪ್ರಶ್ನಿಸಿ ಘನ ಸರ್ವೋಚ್ಚ ನ್ಯಾಯಾಲಯದಲ್ಲಿ WP ಸಂಖ್ಯೆ:435/2023 ಮತ್ತು 468/2023 ರಲ್ಲಿ ಪ್ರಕರಣಗಳು ದಾಖಲಾಗಿರುತ್ತವೆ.<br><br>ಮುಂದುವರೆದು, ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ದಿನಾಂಕ:25.04.2023ರಂದು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ನಡೆದ ವಿಚಾರಣೆಯಲ್ಲಿ ರಾಜ್ಯ ಸರ್ಕಾರವನ್ನು ಪ್ರತಿನಿಧಿಸುತ್ತಿರುವ Solicitor Generalರವರು ಪರಿಷ್ಕೃತ ಪುನರ್ ವರ್ಗೀಕರಣದ ಆದೇಶ ಸಂಖ್ಯೆ: ಹಿಂವಕ 135 ಬಿಸಿಎ 2023, ದಿನಾಂಕ:27.03.2023ರ ಆದೇಶವನ್ನು ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಅಳವಡಿಸಿಕೊಳ್ಳಲಾಗುವುದಿಲ್ಲವೆಂದು ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002ರ ಆದೇಶವನ್ನು ಮುಂದುವರೆಸಲಾಗುವುದೆಂದು ನೀಡಿರುವ ಹೇಳಿಕೆ (Statement of record) ದಾಖಲಾಗಿರುತ್ತದೆ.<br><br>ಪ್ರಸ್ತುತ ಅನಾಥ ಮಕ್ಕಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಯಾವುದೇ ಮೀಸಲಾತಿ ಇರುವುದಿಲ್ಲ. ಸದರಿ ಪ್ರಕರಣವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುತ್ತದೆ. |

**ಸಂಖ್ಯೆ: ಮಮಇ 154 ಮಭಾಬ 2026**

**(ಡಿ.ಕೆ. ಶಿವಕುಮಾರ್)**
**ಮುಖ್ಯಮಂತ್ರಿ,**
**ಕರ್ನಾಟಕ ಸರ್ಕಾರ.**

